ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ದಿನಾಂಕ: 11-08-2023

**ವೈದ್ಯಕೀಯ, ದಂತವೈದ್ಯಕೀಯ, ಇಂಜಿನಿಯರಿಂಗ್, ಆರ್ಕಿಟೆಕ್ಚರ್, ಕೃಷಿ ವಿಜ್ಞಾನ, ವೆಟರಿನರಿ, ಫಾರ್ಮಸಿ, ಮುಂತಾದ ಕೋರ್ಸುಗಳಿಗೆ – ಯುಜಿನೀಟ್-2023 ಮತ್ತು ಯುಜಿಸಿಇಟಿ-2023 ಅಣುಕು ಸೀಟು ಹಂಚಿಕೆ**

- **ವೈದ್ಯಕೀಯ, ದಂತವೈದ್ಯಕೀಯ, ಇಂಜಿನಿಯರಿಂಗ್, ಆರ್ಕಿಟೆಕ್ಚರ್, ಕೃಷಿ ವಿಜ್ಞಾನ, ವೆಟರಿನರಿ, ಫಾರ್ಮಸಿ,** ಮುಂತಾದ ಕೋರ್ಸುಗಳ ಪ್ರವೇಶಕ್ಕಾಗಿ, ಅರ್ಹ ಅಭ್ಯರ್ಥಿಗಳು ದಾಖಲಿಸಿರುವ ಇಚ್ಛೆ / ಆಯ್ಕೆಗಳನ್ನು ದಾಖಲಿಸಿ ಮೆರಿಟ್ ಮತ್ತು ರೋಸ್ಟರ್ ಪದ್ಧತಿ ಆಧಾರದ ಮೇಲೆ ಅಣುಕು ಸೀಟು ಹಂಚಿಕೆಯನ್ನು ಮಾಡಿ ಫಲಿತಾಂಶವನ್ನು ದಿನಾಂಕ 11-08-2023 ರಂದು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.
- ಅಭ್ಯರ್ಥಿಗಳು ಅಣಕು ಫಲಿಂತಾಂಶವನ್ನು ಪರಿಶೀಲಿಸಿದ ನಂತರ ಇಚ್ಛೆ / ಆಯ್ಕೆಗಳನ್ನು ಅವಶ್ಯವಿದ್ದಲ್ಲಿ ಬದಲಾಯಿಸಬಹುದಾಗಿದೆ / ಸೇರಿಸಬಹುದಾಗಿದೆ / ಅಳಿಸಬಹುದಾಗಿದೆ.
- ಮೊದಲನೇ ಸುತ್ತಿಗೆ ಇಚ್ಛೆ / ಆಯ್ಕೆಗಳನ್ನು ದಾಖಲಿಸದೇ ಇರುವ ಅರ್ಹ ಅಭ್ಯರ್ಥಿಯೂ ಸಹ ಇಷ್ಟವಿದ್ದಲ್ಲಿ ಇಚ್ಛೆ / ಆಯ್ಕೆಗಳನ್ನು ಆದ್ಯತಾ ಕ್ರಮದಲ್ಲಿ ಅಣಕು ಸೀಟು ಹಂಚಿಕೆಯ ಫಲಿತಾಂಶದ ನಂತರವೂ ದಾಖಲಿಸಬಹುದಾಗಿರುತ್ತದೆ.
- ಅಭ್ಯರ್ಥಿಗಳು ಅಂತಿಮವಾಗಿ ಸಲ್ಲಿಸುವ ಇಚ್ಛೆ / ಆಯ್ಕೆಗಳ (options) ಪಟ್ಟಿಯ ಪ್ರಿಂಟ್ ಅನ್ನು ತೆಗೆದು ಇಟ್ಟುಕೊಳ್ಳಬೇಕು.
- ಅಣಕು ಸೀಟು ಹಂಚಿಕೆಯ ನಂತರ ಅಭ್ಯರ್ಥಿಗಳು ಬದಲಾಯಿಸುವ / ಮಾರ್ಪಡಿಸಿ ಅಂತಿಮವಾಗಿ ದಾಖಲಿಸುವ ಇಚ್ಛೆ / ಆಯ್ಕೆಗಳನ್ನು ಪರಿಗಣಿಸಿ ಮೆರಿಟ್ ಆಧಾರದ ಮೇಲೆ **ವೈದ್ಯಕೀಯ, ದಂತವೈದ್ಯಕೀಯ, ಇಂಜಿನಿಯರಿಂಗ್, ಆರ್ಕಿಟೆಕ್ಚರ್, ಕೃಷಿ ವಿಜ್ಞಾನ, ವೆಟರಿನರಿ, ಫಾರ್ಮಸಿ,** ಮುಂತಾದ ಕೋರ್ಸುಗಳ ಪ್ರವೇಶಕ್ಕಾಗಿ ಮೊದಲನೇ ಸುತ್ತಿನ ನೈಜ ಸೀಟು ಹಂಚಿಕೆಯನ್ನು ಮಾಡಿ ಫಲಿತಾಂಶವನ್ನು 16-08-2023 ರಂದು ಪ್ರಕಟಿಸಲಾಗುವುದು.
- ಮೊದಲನೇ ಸುತ್ತಿನ ನೈಜ ಸೀಟು ಹಂಚಿಕೆಯ ಫಲಿತಾಂಶ ಪ್ರಕಟಣೆಯ ನಂತರ ಅಭ್ಯರ್ಥಿಗಳಿಗೆ ಹಂಚಿಕೆಯಾದ ಸೀಟುಗಳ ಬಗ್ಗೆ ನಿರ್ಧರಿಸಲು ನಾಲ್ಕು CHOICE ಗಳನ್ನು ನೀಡಲಾಗುವುದು. ಅಭ್ಯರ್ಥಿಗಳು ಪೋಷಕರೊಡನೆ ಚರ್ಚಿಸಿ, ಸೂಕ್ತ ನಿರ್ಧಾರ ತೆಗೆದು ಕೊಂಡು ಮುಂದಿನ ಕ್ರಮ ವಹಿಸಬಹುದಾಗಿದೆ. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಬಹುದಾಗಿದೆ.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in